ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಕಾನೂನು ಮಂತ್ರಿ ಸಂಸದೀಯ ವ್ಯವಹಾರಗಳ ಸಚಿವರು).—

ಮಾನ್ಯ ಅಧ್ಯಕ್ಷರೆ ೧೯೮೬ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ಈ ಧನವಿನಿಯೋಗ ವಿಧೇಯಕದ ಮೇಲೆ ಈಗಾಗಲೆ ದೀರ್ಘವಾದಂತಹ ಚರ್ಚೆ ಆಗಿದೆ. ಅದಕ್ಕೆ ದೀರ್ಘವಾದಂತಹ ಉತ್ತರವನ್ನೂ ಕೂಡ ಮಾನ್ಯ ಮುಖ್ಯಮಂತ್ರಿಗಳವರು ಕೊಟ್ಟಿದ್ದಾರೆ. ಎಲ್ಲಾ ವಿಷಯಗಳ ಮೇಲೆಯೂ ಕೂಡ ಸನ್ಮಾನ್ಯ ವಿರೋಧಪಕ್ಷದ ನಾಯಕರು ಮತ್ತು ಇತರ ವಿರೋಧ ಪಕ್ಷದ ಸದಸ್ಯರು ಸಾಕಷ್ಟು ಬೆಳಕನ್ನು ಚೆಲ್ಲಿದ್ದಾರೆ. ಸರಕಾರದಿಂದ ಸೂಕ್ತವಾದಂತಹ ಉತ್ತರವನ್ನು ಕೂಡ ಪಡೆದಿದ್ದಾರೆ. ಆದುದರಿಂದ ಈ ವಿಧೇಯಕಕ್ಕೆ ದಯವಿಟ್ಟು ತಮ್ಮ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೬ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಮತ್ತು 3

ಅಧ್ಯಕ್ಷರು.—''ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ಮತ್ತು ೩ ಎರಡೂ ಕಡೆ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''ಮೊದಲನೆ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು),

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) —ಮಾನ್ಯ ಅಧ್ಯಕ್ಷರೆ, ೧೯೮೬ರ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೬ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ (೨) ವಿಧೇಯಕ

ಪರ್ಯಾಲೋಚನೆ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).--ಮಾನ್ಯ ಅಧ್ಯಕ್ಷರೆ, ೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರಿತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).--ಮಾನ್ಯ ಅಧ್ಯಕ್ಷರೆ, ಸಂಖ್ಯೆ (೨) ಧನವಿನಿಯೋಗ ವಿಧೇಯಕದ ಮೇಲೆ ಈಗಾಗಲೆ ದೀರ್ಘವಾದಂತಹ ಚರ್ಚೆ ಆಗಿದೆ. ಆದಕ್ಕೆ ದೀರ್ಘವಾದಂತಹ ಉತ್ತರವನ್ನೂ ಕೂಡ ಮಾನ್ಯ ಮುಖ್ಯಮಂತ್ರಿಗಳವರು ಕೊಟ್ಟಿದ್ದಾರೆ. ಆದುದರಿಂದ ನಾನು ಅವರಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ ಈ ಸಂಖ್ಯೆ (೨) ವಿಧೇಯಕಕ್ಕೆ ದಯವಿಟ್ಟು ತಮ್ಮ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.--ಪ್ರಸ್ತಾವ ಏನೆಂದರೆ ''೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಮತ್ತು 3

ಅಧ್ಯಕ್ಷರು.--''ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಅಧ್ಯಕ್ಷರು.--ಪ್ರಸ್ತಾವ ಏನೆಂದರೆ, ''ಮೊದಲನೆ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).--ಮಾನ್ಯ ಅಧ್ಯಕ್ಷರೆ, ೧೯೮೬ರ ಧನವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.--ಪ್ರಸ್ತಾವ ಏನೆಂದರೆ ೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಅಂಗೀಕರಿಸಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮುಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ (೩) ವಿಧೇಯಕ

ಪರ್ಯಾಲೋಚನ ಪ್ರಸ್ತಾವ